**All India Radio: Bangalore**
**National Bulletin In Kannada**
**28.11.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.11.2025 07.35 a.m.**

**<>><><*><><<>**

## ಮುಖ್ಯಾಂಶಗಳು

**೧. ಪ್ರಧಾನಿ ನರೇಂದ್ರ ಮೋದಿ ಕರ್ನಾಟಕ-ಗೋವಾ ಪ್ರವಾಸ; ಉಡುಪಿಯಲ್ಲಿ ಶ್ರೀಕೃಷ್ಣ ಮಠದಲ್ಲಿಂದು ಲಕ್ಷಕಂಠ ಗೀತಾ ಪಾರಾಯಣದಲ್ಲಿ ಭಾಗಿ**

**೨. ’ವಿಶ್ವ ಏಕತೆ ಮತ್ತು ವಿಶ್ವಾಸಕ್ಕಾಗಿ ಧ್ಯಾನ’ ಧ್ಯೇಯದ ಬ್ರಹ್ಮಕುಮಾರಿಯರ ಕಾರ್ಯಕ್ರಮ ಉದ್ಘಾಟಿಸಲಿರುವ ರಾಷ್ಟ್ರಪತಿ**

**೩. ಗೋವಾದಲ್ಲಿಂದು ೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ತೆರೆ**

**೪. ಏಷ್ಯನ್ ಕಪ್ ೨೦೨೭ ಫುಟ್‌ಬಾಲ್ ಅರ್ಹತಾ ಸುತ್ತು; ಇಂದು ಭಾರತ - ಲೆಬನಾನ್ ಮುಖಾಮುಖಿ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಇಂದು ಕರ್ನಾಟಕ ಮತ್ತು ಗೋವಾಕ್ಕೆ ಭೇಟಿ ನೀಡಲಿದ್ದಾರೆ. ಕರ್ನಾಟಕದ ಉಡುಪಿಯ ಶ್ರೀ ಕೃಷ್ಣ ಮಠಕ್ಕೆ ಭೇಟಿ ನೀಡಿ, ಶ್ರೀಕೃಷ್ಣನ ದರ್ಶನ ಪಡೆಯಲಿರುವ ಪ್ರಧಾನಿ, ಲಕ್ಷಕಂಠ ಗೀತಾ ಪಾರಾಯಣದಲ್ಲಿ ಭಾಗವಹಿಸಲಿದ್ದಾರೆ. ಕೃಷ್ಣ ಗರ್ಭಗುಡಿಯ ಮುಂಭಾಗದಲ್ಲಿರುವ ಸುವರ್ಣ ತೀರ್ಥ ಮಂಟಪವನ್ನು ಉದ್ಘಾಟಿಸಲಿದ್ದಾರೆ. ಜೊತೆಗೆ ಪವಿತ್ರ ಕನಕನ ಕಿಂಡಿಗೆ ಕನಕ ಕವಚವನ್ನು ಅರ್ಪಿಸಲಿದ್ದಾರೆ. ಲಕ್ಷಕಂಠ ಗೀತಾ ಪಾರಾಯಣ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಸಾಧುಗಳ, ವಿದ್ವಂಸರು ಹಾಗೂ ಭಕ್ತರು ಸೇರಿದಂತೆ ಒಂದು ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸಿ ಭಗವದ್ಗೀತೆಯನ್ನು ಒಟ್ಟಾಗಿ ಪಠಿಸಲಿದ್ದಾರೆ. ಮಂಗಳೂರಿಗೆ ವಿಶೇಷ ವಿಮಾನದಲ್ಲಿ ಆಗಮಿಸಲಿರುವ ಅವರು, ಬಳಿಕ ಉಡುಪಿಗೆ ತೆರಳಲಿದ್ದಾರೆ. ಪ್ರಧಾನಿ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಬಿಗಿಬಂದೋಬಸ್ತ್ ಏರ್ಪಡಿಸಲಾಗಿದೆ. ಉಡುಪಿ ಜಿಲ್ಲೆಯಲ್ಲಿ ಡ್ರೋನ್ ಹಾರಾಟ ನಿಷೇಧಿಸಲಾಗಿದೆ. ಶ್ರೀಕೃಷ್ಣ ಮಠಕ್ಕೆ ಏಳು ಗಂಟೆಗಳ ಕಾಲ ಭಕ್ತರಿಗೆ ದರ್ಶನ ನಿರ್ಬಂಧಿಸಲಾಗಿದೆ.

**<>><><*><><<>**

ಉಡುಪಿ ಭೇಟಿಯ ನಂತರ ಪ್ರಧಾನಮಂತ್ರಿ, ಗೋವಾದಲ್ಲಿ ಸಂಸ್ಥಾನ ಗೋಕರ್ಣ ಪರ್ತಗಾಲಿ ಜೀವೋತ್ತಮ ಮಠದ ೫೫೦ ನೇ ವಾರ್ಷಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಮಠದಲ್ಲಿ ಕಂಚಿನಿಂದ ಮಾಡಲ್ಪಟ್ಟ ೭೭ ಅಡಿ ಎತ್ತರದ ರಾಮನ ಪ್ರತಿಮೆಯನ್ನು ಪ್ರಧಾನಿ ಅನಾವರಣಗೊಳಿಸಲಿದ್ದಾರೆ ಮತ್ತು ರಾಮಾಯಣ ವಿಷಯಾಧಾರಿತ ಉದ್ಯಾನವನ್ನೂ ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ವಿಶೇಷ ಅಂಚೆ ಚೀಟಿ ಮತ್ತು ಸ್ಮರಣಾರ್ಥ ನಾಣ್ಯವನ್ನು ಪ್ರಧಾನಿ ಬಿಡುಗಡೆ ಮಾಡಲಿದ್ದಾರೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಲಖನೌಗೆ ಭೇಟಿ ನೀಡಲಿದ್ದು, ಅಲ್ಲಿ ಅವರು ಎರಡು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ’ವಿಶ್ವ ಏಕತೆ ಮತ್ತು ವಿಶ್ವಾಸಕ್ಕಾಗಿ ಧ್ಯಾನ’ ಎಂಬ ಧ್ಯೇಯವಾಕ್ಯದೊಂದಿಗೆ ನಡೆಯುವ ೨೦೨೫-೨೬ರ ಬ್ರಹ್ಮಕುಮಾರಿಯರ ವಾರ್ಷಿಕ ಉದ್ಘಾಟನಾ ಸಮಾರಂಭದಲ್ಲಿ ರಾಷ್ಟ್ರಪತಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ವಜ್ರಮಹೋತ್ಸವ ಆಚರಣೆಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಬ್ರಹ್ಮಕುಮಾರಿಯರ ಕಾರ್ಯಕ್ರಮದಲ್ಲಿ ರಾಷ್ಟ್ರಪತಿಗಳು ತರಬೇತಿ ಕೇಂದ್ರದಲ್ಲಿ ಧ್ಯಾನ ಮಾಡಲಿದ್ದು, ತಲಾ ೫ ಮಹಿಳೆಯರು ಮತ್ತು ೫ ಪುರುಷರಿಗೆ ಧ್ವಜ ಮತ್ತು ಕಲಶವನ್ನು ವಿತರಿಸಲಿದ್ದಾರೆ ಎಂದು

ಬ್ರಹ್ಮಕುಮಾರಿಯರ ಅಪರ ಪ್ರಧಾನ ಕಾರ್ಯದರ್ಶಿ ಡಾ.ಮೃತ್ಯುಂಜಯ್ ಮಾಹಿತಿ ನೀಡಿದ್ದಾರೆ. ಬಳಿಕ ರಾಷ್ಟ್ರಪತಿಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ವಜ್ರಮಹೋತ್ಸವ ಆಚರಣೆಯ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದು, ಅದರ ೧೯ ನೇ ರಾಷ್ಟ್ರೀಯ ಜಾಂಬೂರಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ೬೧ ವರ್ಷಗಳ ನಂತರ, ಈ ಕಾರ್ಯಕ್ರಮವನ್ನು ಲಕ್ನೋದಲ್ಲಿ ನಡೆಸಲಾಗುತ್ತಿದೆ. ಭಾರತದ ವಿವಿಧ ರಾಜ್ಯಗಳಿಂದ ಸುಮಾರು ೩೩ ಸಾವಿರ ಸ್ಕೌಟ್ಸ್, ಗೈಡ್ಸ್, ರೋವರ್ಸ್ ಮತ್ತು ರೇಂಜರ್ಸ್, ಮಾಲ್ಡೀವ್ಸ್, ನೇಪಾಳ, ಶ್ರೀಲಂಕಾ ಮತ್ತು ಸೌದಿ ಅರೇಬಿಯಾ ಸೇರಿದಂತೆ ಏಷ್ಯಾ-ಪೆಸಿಫಿಕ್ ಪ್ರದೇಶದ ೧ ಸಾವಿರದ ೫೦೦ ಕ್ಕೂ ಹೆಚ್ಚು ಯುವ ಪ್ರತಿನಿಧಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ.

<>><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಡಿಸೆಂಬರ್ ೩ ರಂದು ಕೇರಳಕ್ಕೆ ಭೇಟಿ ನೀಡಲಿದ್ದು, ನೌಕಾಪಡೆಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ ಮತ್ತು ಕಾರ್ಯಾಚರಣೆಯ ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ. ತಿರುವನಂತಪುರಂ ಬಳಿಯ ಶಂಗುಮುಖಂ ಬೀಚ್‌ನಲ್ಲಿ ನಡೆಯಲಿರುವ ಈ ಕಾರ್ಯಕ್ರಮಕ್ಕೆ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಆತಿಥ್ಯ ವಹಿಸಲಿದ್ದಾರೆ. ಈ ಪ್ರದರ್ಶನವು ಭಾರತೀಯ ನೌಕಾಪಡೆಯ ಸಾಮರ್ಥ್ಯ ಮತ್ತು ಶಕ್ತಿಯನ್ನು ಪ್ರದರ್ಶಿಸುತ್ತದೆ.

<>><><*><><<>

೫೬ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ - ಇಫೀ ೨೦೨೫ ಗೋವಾದಲ್ಲಿ ಇಂದು ಅದ್ಧೂರಿ ಸಮಾರೋಪ ಸಮಾರಂಭದೊಂದಿಗೆ ಮುಕ್ತಾಯಗೊಳ್ಳಲಿದ್ದು, ಖ್ಯಾತ ನಟ ಧರ್ಮೇಂದ್ರ ಅವರಿಗೆ ಗೌರವ ಸಲ್ಲಿಸಲಾಗುತ್ತಿದೆ. ಈ ತಿಂಗಳ ೨೦ ರಂದು ಪ್ರಾರಂಭವಾದ ಈ ಉತ್ಸವದಲ್ಲಿ ೮೧ ದೇಶಗಳ ೨೪೦ ಕ್ಕೂ ಹೆಚ್ಚು ಚಲನಚಿತ್ರಗಳು ಪ್ರದರ್ಶಿಸಲ್ಪಟ್ಟಿದ್ದು, ಜಾಗತಿಕ ಸಿನಿಮಾದ ಉತ್ಕೃಷ್ಟತೆಯನ್ನು ಎತ್ತಿ ತೋರಿಸಲಾಗಿದೆ. ಇಫೀ ೨೦೨೫ ರ ಸಮಾರೋಪ ಸಮಾರಂಭದಲ್ಲಿಂದು ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ಮತ್ತು ಚಿತ್ರೋತ್ಸವದ ಅಧ್ಯಕ್ಷ ಶೇಖರ್ ಕಪೂರ್ ಸೇರಿದಂತೆ ಇತರ ಪ್ರಮುಖ ಗಣ್ಯರು ಭಾಗವಹಿಸಲಿದ್ದಾರೆ. ಚಿತ್ರರಂಗದಲ್ಲಿ ೫೦ ವರ್ಷಗಳ ಸುದೀರ್ಘ ಪಯಣವನ್ನು ಪೂರೈಸಿರುವ ಖ್ಯಾತ ನಟ ರಜನಿಕಾಂತ್ ಅವರಿಗೆ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಗುವುದು. ಸಿನಿಮಾದಲ್ಲಿನ ಶ್ರೇಷ್ಠತೆಯನ್ನು ಗುರುತಿಸಿ, ಇಂದು ರಾತ್ರಿ ಗೋಲ್ಡನ್ ಪೀಕಾಕ್ ಪ್ರಶಸ್ತಿ, ದಿ ಸಿಲ್ವರ್ ಪೀಕಾಕ್ ಪ್ರಶಸ್ತಿ ಮತ್ತು ಐಸಿಎಫ್‌ಟಿ ಯುನೆಸ್ಕೋ ಚಲನಚಿತ್ರ ಪ್ರಶಸ್ತಿಯನ್ನು ಆಯ್ದ ಕಲಾವಿದರಿಗೆ ನೀಡಲಾಗುವುದು.

<>><><*><><<>

ವಿಶ್ವವಿದ್ಯಾಲಯ ಧನಸಹಾಯ ಆಯೋಗ, ಯುಜಿಸಿ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಸಕಾಲಿಕ ಪರೀಕ್ಷೆಗಳು ಮತ್ತು ಅಂತಿಮ ಪದವಿಗಳು ಮತ್ತು ಪ್ರಮಾಣಪತ್ರಗಳನ್ನು ತ್ವರಿತವಾಗಿ ನೀಡುವುದನ್ನು ಖಚಿತಪಡಿಸಿಕೊಳ್ಳುವಂತೆ ಸೂಚಿಸಿದೆ. ಈ ಪ್ರಕ್ರಿಯೆಗಳಲ್ಲಿ ವಿಳಂಬವು, ವಿದ್ಯಾರ್ಥಿಗಳಿಗೆ ಸೂಕ್ತ ಮತ್ತು ಗುಣಮಟ್ಟದ ಉದ್ಯೋಗವನ್ನು ಪಡೆಯುವುದನ್ನು ತಡೆಯುವುದರಿಂದ ಅವರನ್ನು ಅವಕಾಶ ವಂಚಿತರನ್ನಾಗಿ ಮಾಡುತ್ತದೆ ಎಂದು ಆಯೋಗ ತಿಳಿಸಿದೆ. ಶೈಕ್ಷಣಿಕ ವೇಳಾಪಟ್ಟಿಯಂತೆ ಸಕಾಲಿಕ ಪರೀಕ್ಷೆಗಳನ್ನು ಬರೆಯಲು ಮತ್ತು ಫಲಿತಾಂಶಗಳನ್ನು ತಿಳಿದುಕೊಳ್ಳಲು ವಿದ್ಯಾರ್ಥಿಗಳು ಅರ್ಹರಾಗಿರುತ್ತಾರೆ ಎಂದು ಆಯೋಗ ಸ್ಪಷ್ಟಪಡಿಸಿದೆ. ಫಲಿತಾಂಶಗಳ ಘೋಷಣೆಯ ೧೮೦ ದಿನಗಳ ಒಳಗೆ ವಿದ್ಯಾರ್ಥಿಗಳು ಪದವಿ ಪಡೆಯುವಂತಾಗಬೇಕು ಎಂದಿರುವ ಆಯೋಗ, ಈ ನಿಯಮಗಳನ್ನು ಪಾಲಿಸದಿದ್ದಲ್ಲಿ ಶೈಕ್ಷಣಿಕ ಸಂಸ್ಥೆಗಳ ವಿರುದ್ಧ ದಂಡನಾತ್ಮಕ ಕ್ರಮ ಕೈಗೊಳ್ಳುವ ಅಧಿಕಾರವನ್ನು ಆಯೋಗ ಹೊಂದಿದೆ ಎಂದು ಎಚ್ಚರಿಸಿದೆ.

<>><><*><><<>

ತೆರಿಗೆದಾರರು ದಂಡ ತಪ್ಪಿಸಲು ಮತ್ತು ರಿಟರ್ನ್‌ಗಳನ್ನು ಸ್ವಯಂಪ್ರೇರಿತವಾಗಿ ಆದಾಯವನ್ನು ಪರಿಶೀಲಿಸಿ ಸಲಹೆ ನೀಡುವ ವಿಶೇಷ ಅಭಿಯಾನವನ್ನು ಮುಂದಿನ ತಿಂಗಳ ೩೧ ರವರೆಗೆ ಕೇಂದ್ರ ನೇರ ತೆರಿಗೆ ಮಂಡಳಿ

ಹಮ್ಮಿಕೊಂಡಿದೆ. ಈ ಅಭಿಯಾನ ವಿದೇಶಿ ಆಸ್ತಿಗಳ ಪರಿಚ್ಛೇದ ಮತ್ತು ವಿದೇಶಿ ಮೂಲದ ಆದಾಯ ತೆರಿಗೆ ರಿಟರ್ನ್ಸ್ ಅನ್ನು ಸುಗಮಗೊಳಿಸಲಿದೆ. ಈ ಅಭಿಯಾನದ ಅಡಿಯಲ್ಲಿ ಸಿಬಿಡಿಟಿ ಇಂದಿನಿಂದ ತೆರಿಗೆದಾರರನ್ನು ಗುರುತಿಸಲು ಎಸ್.ಎಮ್.ಎಸ್ ಮತ್ತು ಇ-ಮೇಲ್‌ಗಳನ್ನು ಕಳುಹಿಸುತ್ತದೆ. ಎಲ್ಲಾ ಅರ್ಹ ತೆರಿಗೆದಾರರು ಈ ಅವಕಾಶವನ್ನು ಬಳಸಿಕೊಳ್ಳುವಂತೆ ಸಿಬಿಡಿಟಿ ಒತ್ತಾಯಿಸಿದೆ.

<>><><*><><<>

ಶ್ರೀಲಂಕಾ ಕರಾವಳಿ ಮತ್ತು ನೈಋತ್ಯ ಬಂಗಾಳ ಕೊಲ್ಲಿಯ ಮೇಲೆ ಬೀಸುತ್ತಿರುವ ದಿತ್ವಾ ಚಂಡಮಾರುತವು, ಗಂಟೆಗೆ ೧೩ ಕಿಲೋಮೀಟರ್ ವೇಗದಲ್ಲಿ ಉತ್ತರ ವಾಯುವ್ಯ ದಿಕ್ಕಿಗೆ ಚಲಿಸಿದೆ. ಇಂದು ಬೆಳಿಗ್ಗೆ ಉತ್ತರ ತಮಿಳುನಾಡು ಮತ್ತು ದಕ್ಷಿಣ ಆಂಧ್ರ ಕರಾವಳಿಯ ಕಡೆಗೆ ಚಲಿಸುವ ಸಾಧ್ಯತೆಯಿದೆ. ಪಂಬನ್, ತೂತುಕುಡಿ, ನಾಗಪಟ್ಟಣಂ ಮತ್ತು ಕಾರೈಕಲ್ ಬಂದರುಗಳಲ್ಲಿ ಸ್ಥಳೀಯ ಎಚ್ಚರಿಕೆ ಸಿಗ್ನಲ್ ಸಂಖ್ಯೆ ೪ ಅನ್ನು ನೀಡಲಾಗಿದೆ, ಚೆನ್ನೈ ಮತ್ತು ಕಡಲೂರು ಬಂದರುಗಳಲ್ಲಿ ಎರಡು ದೂರದ ಎಚ್ಚರಿಕೆ ಸಿಗ್ನಲ್‌ಗಳನ್ನು ನೀಡಲಾಗಿದೆ. ವಿವಿಧ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ಮುಂದಿನ ಮೂರು ದಿನಗಳಲ್ಲಿ ಉತ್ತರ ತಮಿಳುನಾಡಿನ ಇತರ ಕರಾವಳಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇದೆ.

<>><><*><><<>

ಹಾಂಗ್ ಕಾಂಗ್‌ನ ಅಪಾರ್ಟ್‌ಮೆಂಟ್ ಸಂಕೀರ್ಣ ಒಂದರಲ್ಲಿ ಸಂಭವಿಸಿದ ಅಗ್ನಿ ದುರಂತದಲ್ಲಿ ಮೃತಪಟ್ಟರ ಸಂಖ್ಯೆ ೯೪ಕ್ಕೆ ಎರಿಕೆಯಾಗಿದೆ. ೨೮೦ ಕ್ಕೂ ಹೆಚ್ಚು ಮಂದಿ ನಾಪತ್ತೆಯಾಗಿದ್ದಾರೆ. ಈ ನಡುವೆ, ಇನ್ನೂ ಅನೇಕ ಜನರು ಕಟ್ಟಡದಲ್ಲಿ ಸಿಲುಕಿರುವ ಹಿನ್ನೆಲೆಯಲ್ಲಿ ಈ ಸಂಖ್ಯೆಗಳು ಹೆಚ್ಚಾಗುವ ಸಂಭವವಿದೆ ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ. ಒಟ್ಟು ೭೯ ಜನರು ಗಾಯಗೊಂಡಿದ್ದು, ಅವರಲ್ಲಿ ೧೫ ಜನರ ಸ್ಥಿತಿ ಚಿಂತಾಜನಕ ಮತ್ತು ೨೮ ಜನರ ಸ್ಥಿತಿ ಗಂಭೀರವಾಗಿದೆ ಎಂದು ವರದಿಯಾಗಿದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ಟಿ-೨೦ ವಿಶ್ವಕಪ್ ಗೆದ್ದ ಅಂಧರ ಮಹಿಳಾ ಕ್ರಿಕೆಟ್ ತಂಡವನ್ನು ಭೇಟಿಯಾದರು. ಮಹಿಳಾ ತಂಡವು ಪ್ರಧಾನಿ ನರೇಂದ್ರ ಮೋದಿಗೆ ಹಸ್ತಾಕ್ಷರವಿರುವ ಬ್ಯಾಟ್ ಅನ್ನು ಉಡುಗೊರೆಯಾಗಿ ನೀಡಿತು. ಕೊಲಂಬೊದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಮಹಿಳಾ ಅಂಧರ ಕ್ರಿಕೆಟ್ ತಂಡ, ನೇಪಾಳವನ್ನು ಏಳು ವಿಕೆಟ್‌ಗಳಿಂದ ಸೋಲಿಸಿತ್ತು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಆಟಗಾರ್ತಿಯರು ತಮ್ಮ ಸ್ಫೂರ್ತಿದಾಯಕ ಅನುಭವಗಳನ್ನು ಹಂಚಿಕೊಂಡಿದ್ದಾರೆ ಎಂದು ಪ್ರಧಾನಿ ತಿಳಿಸಿದ್ದಾರೆ.

<>><><*><><<>

ಗುಜರಾತ್‌ನ ಅಹಮದಾಬಾದ್‌ನಲ್ಲಿರುವ ಇಕೆಎ ಅರೆನಾದಲ್ಲಿ ಇಂದು ನಡೆಯಲಿರುವ ಎಎಫ್‌ಸಿ ೧೭ ವರ್ಷದೊಳಗಿನವರ ಏಷ್ಯನ್ ಕಪ್ ೨೦೨೬ ರ ಸೌದಿ ಅರೇಬಿಯಾ ಡಿ ಅರ್ಹತಾ ಗುಂಪಿನ ಫುಟ್‌ಬಾಲ್ ಪಂದ್ಯದಲ್ಲಿ ಭಾರತ ಹಾಗೂ ಲೆಬನಾನ್ ಮುಖಾಮುಖಿಯಾಗಲಿವೆ. ಪಂದ್ಯ, ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ. ಗ್ರೂಪ್ ಡಿ ಅಂಕಗಳ ಪಟ್ಟಿಯಲ್ಲಿ, ಭಾರತ ಪ್ರಸ್ತುತ ನಾಲ್ಕು ಅಂಕಗಳೊಂದಿಗೆ ಎರಡನೇ ಸ್ಥಾನದಲ್ಲಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**